ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಬಿಟಿಇ/01/ಇಸಿಎಸ್(2)/2018

ಕಾರ್ಯದರ್ಶಿಯವರ ಕಛೇರಿ,
ತಾಂತ್ರಿಕ ಪರೀಕ್ಷಾ ಮಂಡಳಿ,
ಅರಮನೆ ರಸ್ತೆ, ಬೆಂಗಳೂರು -01.
ದಿನಾಂಕ: 23-07-2018

**ಸುತ್ತೋಲೆ**

ವಿಷಯ: ಡಿಸಿಇಟಿ-2018 ನೋಂದಾಯಿತ C-15 ಪಠ್ಯಕ್ರಮದ ಡಿಪ್ಲೋಮ ವಿದ್ಯಾರ್ಥಿಗಳಿಗೆ ದೃಢೀಕೃತ ತಾತ್ಕಾಲಿಕ ಅಂಕಪಟ್ಟಿ ನೀಡುವ ಕುರಿತು.

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಡಿಸಿಇಟಿ-2018 ನೋಂದಾಯಿತ C-15 ಪಠ್ಯಕ್ರಮದ ವಿದ್ಯಾರ್ಥಿಗಳು ಬಿಇ ಪ್ರವೇಶಕ್ಕಾಗಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಲ್ಲಿ ದಾಖಲಾತಿ ಪರಿಶೀಲನೆ ವೇಳೆ ಸಲ್ಲಿಸಲು ಅಗತ್ಯವಿರುವ ತಾತ್ಕಾಲಿಕ ಡಿಪ್ಲೋಮ ಅಂಕಪಟ್ಟಿಗಳನ್ನು ಬಿಟಿಇ ಲಿಂಕ್ಸ್ ವೆಬ್‌ಪೋರ್ಟಲ್‌ನಲ್ಲಿನ ಫಲಿತಾಂಶದಂತೆ ದೃಢೀಕರಿಸಿ ವಿದ್ಯಾರ್ಥಿಗಳಿಗೆ ನೀಡುವಂತೆ ರಾಜ್ಯದ ಎಲ್ಲಾ ಪಾಲಿಟೆಕ್ನಿಕ್ ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಸೂಚಿಸಲಾಗಿದೆ.

ವಿದ್ಯಾರ್ಥಿಗಳು ಆಯಾ ಸಂಸ್ಥೆಗಳಿಂದ ಪಡೆದ ದೃಢೀಕೃತ ತಾತ್ಕಾಲಿಕ ಅಂಕಪಟ್ಟಿಗಳನ್ನು ಬಿಇ ಪ್ರವೇಶಕ್ಕಾಗಿ ದಾಖಲಾತಿ ಪರಿಶೀಲನೆಯ ಸಂದರ್ಭದಲ್ಲಿ ಹಾಜರುಪಡಿಸುವುದು. ತದನಂತರ ತಮಗೆ **ಸೀಟು ಹಂಚಿಕೆಯಾದ ಕಾಲೇಜುಗಳಲ್ಲಿ ಪ್ರವೇಶ ಪಡೆಯುವಾಗ ತಮ್ಮ ತಮ್ಮ ಸಂಸ್ಥೆಗಳಿಂದ ಪಡೆದ ಮೂಲಕ ಅಂಕಪಟ್ಟಿಗಳನ್ನು ಸಲ್ಲಿಸಿ ಪ್ರವೇಶ ಪಡೆಯಲು ಸೂಚಿಸಲಾಗಿದೆ.**

ಕಾರ್ಯದರ್ಶಿ

ಇವರಿಗೆ,

ರಾಜ್ಯಾದ್ಯಂತ ಎಲ್ಲಾ ಪಾಲಿಟೆಕ್ನಿಕ್ ಸಂಸ್ಥೆಯ ಪ್ರಿನ್ಸಿಪಾಲರುಗಳಿಗೆ – ಮಾಹಿತಿ ಮತ್ತು ಮುಂದಿನ ಅಗತ್ಯ ಕ್ರಮಕ್ಕಾಗಿ

ಪ್ರತಿ:

1. ಇ-ಆಡಳಿತ – ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
2. ನಿರ್ದೇಶಕರ ಆಪ್ತಶಾಖೆ